ಕರ್ನಾಟಕ ಸರ್ಕಾರ
Government of Karnataka

ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ
(ಅರಣ್ಯ ಪಡೆ ಮುಖ್ಯಸ್ಥರು)ರವರ ಕಛೇರಿ
Office of the
Principal Chief Conservator of Forests
(Head of Forest Force)

ಅರಣ್ಯ ಭವನ, 18ನೇ ಅಡ್ಡರಸ್ತೆ
ಮಲ್ಲೇಶ್ವರಂ, ಬೆಂಗಳೂರು-03
Aranya Bhavan, 18th Cross
Malleshwaram, Bengaluru-03
Tele: 080 23343770
Email: pccfkar@gmail.com

**No.**KFD/HOFF/A1(IFS)/2/2022-PnR-KFD

**E-812094**
ದಿನಾಂಕ:30.06.2025

## ಅಧಿಕೃತ ಜ್ಞಾಪನ

**ವಿಷಯ:** ಮಲೈಮಹದೇಶ್ವರ ವನ್ಯಜೀವಿ ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿ, ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಇವರನ್ನು ಕಡ್ಡಾಯ ರಜೆಯ ಮೇಲೆ ಕಳುಹಿಸುವ ಬಗ್ಗೆ.

**ಉಲ್ಲೇಖ:** ಮಾನ್ಯ ಅರಣ್ಯ, ಜೀವಿಶಾಸ್ತ್ರ, ಮತ್ತು ಪರಿಸರ ಸಚಿವರು, ಕರ್ನಾಟಕ ಸರ್ಕಾರ ರವರ ಟಿಪ್ಪಣಿ ಸಂಖ್ಯೆ:ಅಜೀಪ/1016/2025-26 ದಿನಾಂಕ:30.06.2025

### ಪ್ರಸ್ತಾವನೆ:

ಮಾನ್ಯ ಅರಣ್ಯ ಜೀವಿಶಾಸ್ತ್ರ, ಮತ್ತು ಪರಿಸರ ಸಚಿವರು, ಕರ್ನಾಟಕ ಸರ್ಕಾರ ರವರ ಉಲ್ಲೇಖಿತ ಟಿಪ್ಪಣಿಯಲ್ಲಿ ಮಲೈಮಹದೇಶ್ವರ ಬೆಟ್ಟ ವನ್ಯಜೀವಿ ವಿಭಾಗದಲ್ಲಿ ಒಂದು ತಾಯಿ ಹುಲಿ ಮತ್ತು ನಾಲ್ಕು ಮರಿಗಳು ಅಸಹಜ ಸಾವಿಗಾಡಿರುವುದು ಅತ್ಯಂತ ನೋವಿನ ಸಂಗತಿಯಾಗಿದ್ದು, ಈ ಐದು ಹುಲಿಗಳು ರಸ್ತೆಯಿಂದ ಕೇವಲ 100 ಮೀಟರ್ ದೂರದಲ್ಲಿ ಸತ್ತುಬಿದ್ದಿದ್ದರೂ ಎರಡು ದಿನಗಳವರೆಗೆ ಇಲಾಖೆಯ ಸಿಬ್ಬಂದಿಯ ಗಮನಕ್ಕೆ ಬಾರದಿರುವುದು ಅರಣ್ಯ, ವನ್ಯಜೀವಿ ಸಂರಕ್ಷಣೆಯಲ್ಲಿ ಲೋಪವಾಗಿರುವುದನ್ನು ಅತ್ಯಂತ ಗಂಭೀರವಾಗಿ ಪರಿಗಣಿಸಲಾಗಿದೆ ಹಾಗೂ ಸಾವಿಗೀಡಾದ ಸ್ಥಳದಿಂದ ಕೇವಲ 800 ಮೀಟರ್ ದೂರದಲ್ಲಿ ಕಳ್ಳಬೇಟೆ ನಿಗ್ರಹ ಶಿಬಿರವಿದ್ದರೂ ವನ್ಯಜೀವಿ ರಕ್ಷಣೆಯಾಗದಿರುವುದು ಹಾಗೂ ಕಳೆದ ಮೂರು ತಿಂಗಳಿನಿಂದ ಮಾಧ್ಯಮಗಳಲ್ಲಿ ಮುಂಚೂಣಿಯ ಹೊರಗುತ್ತಿಗೆ ಸಿಬ್ಬಂದಿಗೆ ವೇತನ ಭತ್ಯೆ ನೀಡದೇ ಇರುವುದು ಗಸ್ತು ಕಾರ್ಯಕ್ಕೆ ಅಡಚಣೆ ಉಂಟಾಗಿರುತ್ತದೆ. ಇದಕ್ಕೆ ಮಲೈಮಹದೇಶ್ವರ ವನ್ಯಜೀವಿ ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿ, ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ, ವಲಯ ಅರಣ್ಯಾಧಿಕಾರಿ ಮತ್ತು ಉಪ ವಲಯ ಅರಣ್ಯಾಧಿಕಾರಿ ಹಾಗೂ ಗಸ್ತು ಸಿಬ್ಬಂದಿಯ ಕರ್ತವ್ಯ ಲೋಪವೇ ಕಾರಣವೆಂಬುದು ಮೇಲ್ನೋಟಕ್ಕೆ ಕಂಡುಬಂದಿರುವ ಕಾರಣದಿಂದ ತನಿಖೆ ನಡೆಸಬೇಕಾಗಿರುವ ಹಿನ್ನಲೆಯಲ್ಲಿ, ಸಂಬಂಧಿಸಿದ ಶಾಖೆಯ ಉಪ ವಲಯ ಅರಣ್ಯಾಧಿಕಾರಿ-ಕಂ-ಮೋಜಣಿದಾರ ಮತ್ತು ಗಸ್ತು ಸಿಬ್ಬಂದಿಗಳ ಸಂಬಂಧ ಕ್ರಮವನ್ನು ಪ್ರತ್ಯೇಕವಾಗಿ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ, ಚಾಮರಾಜನಗರ ವೃತ್ತ, ಚಾಮರಾಜನಗರ ರವರ ಹಂತದಲ್ಲಿ ಕ್ರಮಕೈಗೊಳ್ಳಲಾಗುತ್ತಿದ್ದು, ಮಲೈಮಹದೇಶ್ವರ ಬೆಟ್ಟ ವನ್ಯಜೀವಿ ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿ, ಹನೂರು ವನ್ಯಜೀವಿ ಉಪ ವಿಭಾಗದ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಮತ್ತು ಹೂಗ್ಯಂ ವನ್ಯಜೀವಿ ವಲಯದ ವಲಯ ಅರಣ್ಯಾಧಿಕಾರಿ ಇವರುಗಳನ್ನು ತಕ್ಷಣದಿಂದ ಜಾರಿಗೆ ಬರುವಂತೆ ಮುಂದಿನ ಆದೇಶದವರೆಗೆ ಕಡ್ಡಾಯ ರಜೆಯ ಮೇಲೆ ಕಳುಹಿಸಲು ನಿರ್ದೇಶಿಲಾಗಿದ್ದು, ಅದರಂತೆ ಈ ಕೆಳಕಂಡ

### ಆದೇಶ

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಅರಣ್ಯ ಮತ್ತು ವನ್ಯಜೀವಿ ಸಂರಕ್ಷಣೆಯ ಹಿತದೃಷ್ಟಿಯಿಂದ ಮಲೈಮಹದೇಶ್ವರ ಬೆಟ್ಟ ವನ್ಯಜೀವಿ ವಿಭಾಗದಲ್ಲಿ ಒಂದು ತಾಯಿ ಹುಲಿ ಮತ್ತು ನಾಲ್ಕು ಮರಿಗಳು ಅಸಹಜ ಸಾವಿನ ಕುರಿತು ಸಮಗ್ರ ತನಿಖೆ ನಡೆಸಬೇಕಾಗಿರುವ

ಹಿನ್ನೆಲೆಯಲ್ಲಿ ಮಲೈಮಹದೇಶ್ವರ ಬೆಟ್ಟ ವನ್ಯಜೀವಿ ವಿಭಾಗದ **ಈ ಕೆಳಗಿನ ಅಧಿಕಾರಿ/ಸಿಬ್ಬಂದಿಗಳನ್ನು ತಕ್ಷಣದಿಂದ ಜಾರಿಗೆ ಬರುವಂತೆ ಮುಂದಿನ ಆದೇಶದವರೆಗೆ ಕಡ್ಡಾಯ ರಜೆಯ ಮೇಲೆ ತೆರಳಲು ಈ ಮೂಲಕ ಆದೇಶಿಸುತ್ತಾ, ಸದರಿ ಹುದ್ದೆಗಳಿಗೆ ಈ ಕೆಳಕಂಡಂತೆ ಹೆಚ್ಚುವರಿ ಪ್ರಭಾರ ವ್ಯವಸ್ಥೆಯನ್ನು ಕಲ್ಪಿಸಿದೆ.**

| ಕ್ರ. ಸಂ. | ಅಧಿಕಾರಿ/ಸಿಬ್ಬಂದಿಯ ಹೆಸರು ಮತ್ತು ಪದನಾಮ | ಸಂಬಂಧಿಸಿದ ಹುದ್ದೆಗೆ ಹೆಚ್ಚುವರಿ ಪ್ರಭಾರ ವ್ಯವಸ್ಥೆ |
|---|---|---|
| 1 | **ಶ್ರೀ ಚಕ್ರಪಾಣಿ ವೈ., ಭಾ.ಅ.ಸೇ.**<br>ಉಪ ಅರಣ್ಯ ಸಂರಕ್ಷಣಾಧಿಕಾರಿ, ಮಲೈಮಹದೇಶ್ವರ ಬೆಟ್ಟ ವನ್ಯಜೀವಿ ವಿಭಾಗ, ಕೊಳ್ಳೇಗಾಲ. | **ಶ್ರೀ ಸಂತೋಷ್ ಕುಮಾರ್ ಜಿ., ಭಾ.ಅ.ಸೇ.** ಉಪ ಅರಣ್ಯ ಸಂರಕ್ಷಣಾಧಿಕಾರಿ (ಕೇಂದ್ರಸ್ಥಾನ), ಬೆಂಗಳೂರು ಇವರು ಉಪ ಅರಣ್ಯ ಸಂರಕ್ಷಣಾಧಿಕಾರಿ, ಮಲೈ ಮಹದೇಶ್ವರ ಬೆಟ್ಟ ವನ್ಯಜೀವಿ ವಿಭಾಗ, ಕೊಳ್ಳೇಗಾಲ ಹುದ್ದೆಯ ಹೆಚ್ಚುವರಿ ಪ್ರಭಾರವನ್ನು ವಹಿಸಿಕೊಂಡು ಮುಂದಿನ ಆದೇಶದವರೆಗೆ ಕರ್ತವ್ಯ ನಿರ್ವಹಿಸುವುದು. |
| 2 | **ಶ್ರೀ ಗಜಾನನ ಹೆಗಡೆ,**<br>ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ, ಹನೂರು ವನ್ಯಜೀವಿ ಉಪ ವಿಭಾಗ *[ಮಲೈಮಹದೇಶ್ವರ ಬೆಟ್ಟ ವನ್ಯಜೀವಿ ವಿಭಾಗ]* | **ಶ್ರೀ ಸ್ವಪ್ನಿಲ್ ಮನೋಹರ್ ಅಹಿರೆ, ಭಾ.ಅ.ಸೇ. (ಪರೀಕ್ಷಾರ್ಥಿ),** ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ, ಮಲೈ ಮಹದೇಶ್ವರ ಬೆಟ್ಟ ವನ್ಯಜೀವಿ ಉಪ ವಿಭಾಗ, ಕೊಳ್ಳೇಗಾಲ ಇವರು ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ, ಹನೂರು ವನ್ಯಜೀವಿ ಉಪ ವಿಭಾಗ *[ಮಲೈಮಹದೇಶ್ವರ ಬೆಟ್ಟ ವನ್ಯಜೀವಿ ವಿಭಾಗ]* ಹುದ್ದೆಯ ಹೆಚ್ಚುವರಿ ಪ್ರಭಾರವನ್ನು ವಹಿಸಿಕೊಂಡು ಮುಂದಿನ ಆದೇಶದವರೆಗೆ ಕರ್ತವ್ಯ ನಿರ್ವಹಿಸುವುದು. |
| 3 | **ಶ್ರೀ ಮಾದೇಶ,**<br>ಉಪ ವಲಯ ಅರಣ್ಯಾಧಿಕಾರಿ-ಕಂ-ಮೋಜಣಿದಾರರು *[ಕೆ.ಸಿ.ಎಸ್.ಆರ್. ನಿಯಮ 32 ರಡಿ ಪ್ರಸ್ತುತ ಖಾಲಿ ಇರುವ ವಲಯ ಅರಣ್ಯಾಧಿಕಾರಿ ಹೂಗ್ಯಂ ವನ್ಯಜೀವಿ ವಲಯ ಹುದ್ದೆಯ ಸ್ವತಂತ್ರ ಪ್ರಭಾರ]* | **ಶ್ರೀ ಉಮಾಪತಿ ಕೆ., ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ (ರಾ.ಅ.ಸೇ. ಪರೀಕ್ಷಾರ್ಥಿ)** *[ಪ್ರಸ್ತುತ ತರಬೇತಾರ್ಥಿಯಾಗಿ ವಲಯ ಅರಣ್ಯಾಧಿಕಾರಿ, ಹನೂರು ಬಫರ್ ವಲಯದಲ್ಲಿ ಸೂಪರ್ ನ್ಯೂಮರಿ ಹುದ್ದೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವುದು]* ಇವರು ವಲಯ ಅರಣ್ಯಾಧಿಕಾರಿ, ಹೂಗ್ಯಂ ವನ್ಯಜೀವಿ ವಲಯ ಹುದ್ದೆಯ ಹೆಚ್ಚುವರಿ ಪ್ರಭಾರವನ್ನು ವಹಿಸಿಕೊಂಡು ಮುಂದಿನ ಆದೇಶದವರೆಗೆ ಕರ್ತವ್ಯ ನಿರ್ವಹಿಸುವುದು. |

ಮಲೈಮಹದೇಶ್ವರ ಬೆಟ್ಟ ವನ್ಯಜೀವಿ ವಿಭಾಗದಲ್ಲಿನ ಸಂಬಂಧಿಸಿದ ಶಾಖೆಯ ಉಪ ವಲಯ ಅರಣ್ಯಾಧಿಕಾರಿ-ಕಂ-ಮೋಜಣಿದಾರ ಮತ್ತು ಗಸ್ತು ಸಿಬ್ಬಂದಿಗಳ ಸಂಬಂಧ ಸೂಕ್ತ ಕ್ರಮವನ್ನು ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ, ಚಾಮರಾಜನಗರ ವೃತ್ತ, ಚಾಮರಾಜನಗರ ರವರ ಹಂತದಲ್ಲಿ ಪ್ರತ್ಯೇಕವಾಗಿ ಕ್ರಮಕೈಗೊಳ್ಳುವುದು.

ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ
(ಅರಣ್ಯ ಪಡೆ ಮುಖ್ಯಸ್ಥರು)

## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಕರ್ನಾಟಕದ ಗಡಿ ಹಾಗೂ ನದಿಗಳ ವಿವಾದಗಳ ಬಗ್ಗೆ ನಿಗಾವಹಿಸಲು ಸಚಿವರೊಬ್ಬರನ್ನು ನೇಮಿಸುವ ಬಗ್ಗೆ.

**ಪ್ರಸ್ತಾವನೆ:**

ಕರ್ನಾಟಕದ ಗಡಿ ಹಾಗೂ ನದಿಗಳಿಗೆ ಸಂಬಂಧಿಸಿದ ವಿವಾದಗಳ ಬಗ್ಗೆ ನಿರಂತರ ನಿಗಾವಹಿಸಿ, ಕಾನೂನಾತ್ಮಕವಾಗಿ ಮತ್ತು ರಾಜಕೀಯ ನೆಲೆಗಟ್ಟಿನಲ್ಲಿ ಪರಿಶೀಲಿಸಿ ಸಮಯೋಚಿತ ಅವಶ್ಯಕ ಕ್ರಮ ತೆಗೆದುಕೊಳ್ಳಲು ಸಹಾಯಕವಾಗುವಂತೆ ಸಚಿವರೊಬ್ಬರಿಗೆ ವಹಿಸಲು ಸರ್ಕಾರವು ನಿರ್ಧರಿಸಿದೆ. ಆದ್ದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 03 ಪಿಬಿಸಿ 2024, ಬೆಂಗಳೂರು, ದಿನಾಂಕ:30.06.2025.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ ಕರ್ನಾಟಕದ ಗಡಿ ಹಾಗೂ ನದಿಗಳಿಗೆ ಸಂಬಂಧಿಸಿದ ವಿವಾದಗಳ ವಿಷಯದ ಬಗ್ಗೆ ನಿರಂತರವಾಗಿ ಪರಿವೀಕ್ಷಿಸಲು ಶ್ರೀ ಹೆಚ್.ಕೆ. ಪಾಟೀಲ್, ಮಾನ್ಯ ಕಾನೂನು, ನ್ಯಾಯ ಶಾಸನ ರಚನೆ ಹಾಗೂ ಸಂಸದೀಯ ವ್ಯವಹಾರಗಳು ಮತ್ತು ಪ್ರವಾಸೋದ್ಯಮ ಸಚಿವರು, ಇವರಿಗೆ ತಕ್ಷಣದಿಂದ ಜಾರಿಗೆ ಬರುವಂತೆ ಮತ್ತು ಮುಂದಿನ ಆದೇಶದವರೆಗೆ ವಹಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಸಹಿ) 30/6/25
(ಸಂದೀಪ್ ಬಿ.ಕೆ.)
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ರಾಜಕೀಯ)

**ಇವರಿಗೆ :-**

1. ಅಪರ ಮುಖ್ಯ ಕಾರ್ಯದರ್ಶಿ, ಮಾನ್ಯ ಮುಖ್ಯಮಂತ್ರಿರವರ ಸಚಿವಾಲಯ, ವಿಧಾನಸೌಧ, ಬೆಂಗಳೂರು.
2. ಮಾನ್ಯ ಮುಖ್ಯಮಂತ್ರಿಯವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
3. ಮಾನ್ಯ ಕಾನೂನು, ನ್ಯಾಯ ಶಾಸನ ರಚನೆ ಹಾಗೂ ಸಂಸದೀಯ ವ್ಯವಹಾರಗಳು ಮತ್ತು ಪ್ರವಾಸೋದ್ಯಮ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು-ವಿಷಯವನ್ನು ಮಾನ್ಯ ಸಚಿವರ ಗಮನಕ್ಕೆ ತರಬೇಕೆಂದು ಕೋರಿದೆ.
4. ಅಧ್ಯಕ್ಷರು, ಕರ್ನಾಟಕ ಗಡಿ ಹಾಗೂ ನದಿಗಳ ರಕ್ಷಣಾ ಆಯೋಗ, ಬಹುಮಹಡಿ ಕಟ್ಟಡ.
5. ಸರ್ಕಾರದ ಮುಖ್ಯ ಕಾರ್ಯದರ್ಶಿರವರ, ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
6. ಸರ್ಕಾರದ ಕಾರ್ಯದರ್ಶಿರವರ, ಆಪ್ತ ಕಾರ್ಯದರ್ಶಿ, ಸಿಆಸುಇ, ವಿಧಾನಸೌಧ, ಬೆಂಗಳೂರು.
7. ಶಾಖಾ ರಕ್ಷಾ ಕಡತ.

**ಪ್ರತಿ ಮಾಹಿತಿಗಾಗಿ /ಹಾಗೂ ಸೂಕ್ತ ಕ್ರಮಕ್ಕಾಗಿ:**

1. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಅರಣ್ಯ, ಜೀವಿಪರಿಸ್ಥಿತಿ ಮತ್ತು ಪರಿಸರ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಮಹಾಲೇಖಪಾಲರು (ಎ&ಇ), ಕರ್ನಾಟಕ, ಬೆಂಗಳೂರು.
4. ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ವನ್ಯಜೀವಿ), ಅರಣ್ಯ ಭವನ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು.
5. ಅಪರ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಆಡಳಿತ ಮತ್ತು ಸಮನ್ವಯ), ಅರಣ್ಯ ಭವನ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು.
6. ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ/ಅರಣ್ಯ ಸಂರಕ್ಷಣಾಧಿಕಾರಿ, ಚಾಮರಾಜನಗರ/ ಬೆಂಗಳೂರು ವೃತ್ತಗಳಿಗೆ.
7. ಉಪ ಅರಣ್ಯ ಸಂರಕ್ಷಣಾಧಿಕಾರಿ, ಮಲೈ ಮಹದೇಶ್ವರ ಬೆಟ್ಟ ವನ್ಯಜೀವಿ ವಿಭಾಗ, ಕೊಳ್ಳೇಗಾಲ.
8. ಶ್ರೀ ಚಕ್ರಪಾಣಿ ವೈ, ಭಾ.ಅ.ಸೇ., ಉಪ ಅರಣ್ಯ ಸಂರಕ್ಷಣಾಧಿಕಾರಿ, ಮಲೈಮಹದೇಶ್ವರ ಬೆಟ್ಟ ವನ್ಯಜೀವಿ ವಿಭಾಗ, ಕೊಳ್ಳೇಗಾಲ.
9. ಉಪ ಅರಣ್ಯ ಸಂರಕ್ಷಣಾಧಿಕಾರಿ (ಕೇಂದ್ರಸ್ಥಾನ), ಅರಣ್ಯ ಭವನ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು.
10. ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ, ಮಲೈ ಮಹದೇಶ್ವರ ವನ್ಯಜೀವಿ ಉಪ ವಿಭಾಗ, ಕೊಳ್ಳೇಗಾಲ.
11. ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ, ಹನೂರು ವನ್ಯಜೀವಿ ಉಪ ವಿಭಾಗ *[ಮಲೈಮಹದೇಶ್ವರ ಬೆಟ್ಟ ವನ್ಯಜೀವಿ ವಿಭಾಗ].*
12. ಶ್ರೀ ಗಜಾನನ ಹೆಗಡೆ, ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ, ಹನೂರು ವನ್ಯಜೀವಿ ಉಪ ವಿಭಾಗ *[ಮಲೈಮಹದೇಶ್ವರ ಬೆಟ್ಟ ವನ್ಯಜೀವಿ ವಿಭಾಗ].*
13. ವಲಯ ಅರಣ್ಯಾಧಿಕಾರಿ, ಹೂಗ್ಯಂ ವನ್ಯಜೀವಿ ವಲಯ, ಹೂಗ್ಯಂ *[ಮಲೈಮಹದೇಶ್ವರ ಬೆಟ್ಟ ವನ್ಯಜೀವಿ ವಿಭಾಗ].*
14. ಶ್ರೀ ಮಾದೇಶ, ಉಪ ವಲಯ ಅರಣ್ಯಾಧಿಕಾರಿ-ಕಂ-ಮೋಜಣಿದಾರರು *[ಕೆ.ಸಿ.ಎಸ್.ಆರ್. ನಿಯಮ 32 ರಡಿ ಪ್ರಸ್ತುತ ಖಾಲಿ ಇರುವ ವಲಯ ಅರಣ್ಯಾಧಿಕಾರಿ, ಹೂಗ್ಯಂ ವನ್ಯಜೀವಿ ವಲಯ ಹುದ್ದೆಯ ಸ್ವತಂತ್ರ ಪ್ರಭಾರ].*
15. ಈ ಕಚೇರಿಯ ಎ-2 ಮತ್ತು ಬಿ-1 ಶಾಖೆಗಳಿಗೆ.

**ಪ್ರತಿ:**

ಮಾನ್ಯ ಅರಣ್ಯ, ಜೀವಿಶಾಸ್ತ್ರ, ಮತ್ತು ಪರಿಸರ ಸಚಿವರ ಆಪ್ತ ಕಾರ್ಯದರ್ಶಿ, ಕೊಠಡಿ ಸಂಖ್ಯೆ: 36 & 37, ನೆಲಮಹಡಿ, ವಿಕಾಸ ಸೌಧ, ಬೆಂಗಳೂರು ಇವರಿಗೆ ಮಾಹಿತಿಗಾಗಿ ಕಳುಹಿಸುತ್ತಾ ಮಾನ್ಯ ಸಚಿವರ ಆದ್ಯ ಗಮನಕ್ಕೆ ತರಲು ಕೋರಿದೆ.